Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

18.02.2025 18.40 hrs

<><*<><>*><>

ಮುಖ್ಯಾಂಶಗಳು

- ಕೃಷಿ ಪಂಪ್‌ಸೆಟ್‌ಗೆ ೭ ತಾಸು ವಿದ್ಯುತ್ ಪೂರೈಕೆಗೆ ರಾಜ್ಯ ಸರ್ಕಾರ ಬದ್ಧ - ಇಂಧನ ಸಚಿವ ಕೆ.ಜೆ. ಜಾರ್ಜ್
- ರಾಜ್ಯದ ನೀರಾವರಿ ಯೋಜನೆಗಳಿಗೆ ಅನುದಾನ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮನವಿ
- ನಗರ ಪ್ರದೇಶಗಳ ಆಸ್ತಿ ಸರ್ವೇಕ್ಷಣೆಗೆ ರಾಜ್ಯದ ವಿವಿಧೆಡೆ 'ನಕ್ಷಾ' ಯೋಜನೆಗೆ ಚಾಲನೆ
- ಚಿಕ್ಕಮಗಳೂರು ಜಿಲ್ಲೆಯ ಚಂದ್ರದ್ರೋಣ ಪರ್ವತದಲ್ಲಿ ಕಾಡ್ಗಿಚ್ಚು ; ೨೫ ಎಕರೆಗೂ ಹೆಚ್ಚು ಅರಣ್ಯ ಪ್ರದೇಶ ನಾಶ

<><*<><>*><>

ಕೃಷಿ ಪಂಪ್ ಸೆಟ್‌ಗಳಿಗೆ ದಿನದ ೭ ತಾಸು ತ್ರಿ-ಫೇಸ್ ಹಾಗೂ ಗೃಹ ಬಳಕೆ ಮತ್ತು ಕೈಗಾರಿಕೆಗಳಿಗೆ ದಿನದ ೨೪ ಗಂಟೆ ವಿದ್ಯುತ್ ಪೂರೈಸಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ. ದಾವಣಗೆರೆ ಜಿಲ್ಲೆಯಲ್ಲಿಂದು ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳೊಂದಿಗೆ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಈ ವರ್ಷ ವಿದ್ಯುತ್ ಕೊರತೆ ಇಲ್ಲ. ಕೆಲವೊಂದು ತಾಂತ್ರಿಕ ಸಮಸ್ಯೆಯಿಂದ ಕೆಲವು ಪ್ರದೇಶಗಳಲ್ಲಿ ನಿರ್ವಹಣಾ ಕಾರ್ಯಗಳಿಗಾಗಿ ವಿದ್ಯುತ್ ಕಡಿತ ಮಾಡಲಾಗುತ್ತಿದೆಯೇ ಹೊರತು ಲೋಡ್ ಶೆಡ್ಡಿಂಗ್ ಇಲ್ಲ ಎಂದು ಸ್ಪಷ್ಟಪಡಿಸಿದರು. ರಾಜ್ಯದಲ್ಲಿ ಪ್ರತಿನಿತ್ಯ ಸರಾಸರಿ ೧೮ ಸಾವಿರದ ೫೦೦ ಮೆಗಾವ್ಯಾಟ್ ಬೇಡಿಕೆ ಇದೆ. ಬೇಸಿಗೆ ಆರಂಭವಾಗಿರುವುದರಿಂದ ಸರಾಸರಿಗಿಂತ ಶೇಕಡ ೧೦ ರಷ್ಟು ವಿದ್ಯುತ್ ಬೇಡಿಕೆ ಹೆಚ್ಚಳವಾಗಲಿದೆ. ಈ ಹಿನ್ನೆಲೆಯಲ್ಲಿ ಪಂಜಾಬ್ ಮತ್ತು ಉತ್ತರ ಪ್ರದೇಶಗಳಿಂದ ವಿನಿಮಯ ಆಧಾರದಲ್ಲಿ ವಿದ್ಯುತ್ ಪಡೆಯಲಾಗುವುದು ಎಂದು ಸಚಿವ ಕೆ.ಜೆ. ಜಾರ್ಜ್ ಮಾಹಿತಿ ನೀಡಿದರು.

<><*<><>*><>

ಕೇಂದ್ರ ಸರ್ಕಾರವು ಬಾಕಿಯಿರುವ ನೀರಾವರಿ ಯೋಜನೆಗಳಿಗೆ ರಾಜ್ಯಕ್ಕೆ ಅನುಮತಿ ಜೊತೆಗೆ ಅನುದಾನ ನೀಡಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮನವಿ ಮಾಡಿದ್ದಾರೆ. ರಾಜಸ್ಥಾನದ ಉದಯಪುರದಲ್ಲಿ ನಡೆಯುತ್ತಿರುವ ೨ನೇ ಅಖಿಲ ಭಾರತ ರಾಜ್ಯಗಳ ಜಲಸಂಪನ್ಮೂಲ ಸಚಿವರ ಸಮ್ಮೇಳನದಲ್ಲಿ ಅವರು ಮಾತನಾಡಿದರು. ಕರ್ನಾಟಕದ ಯೋಜನೆಗಳಿಗೆ ಕೇಂದ್ರ ಜಲಶಕ್ತಿ ಸಚಿವಾಲಯವು ಆದ್ಯತೆ ಮೇರೆಗೆ ಅಗತ್ಯ ಕ್ರಮ ಕೈಗೊಂಡು, ಅನುಮತಿ ನೀಡಬೇಕು. ಮೇಕೆದಾಟು ಯೋಜನೆಗೆ ಡಿಪಿಆರ್ ಪರಿಗಣಿಸಿ, ಅನುಮತಿ ನೀಡುವಂತೆ ಸಿಡಬ್ಲ್ಯೂಸಿಗೆ ನಿರ್ದೇಶನ ನೀಡಬೇಕು. ಇದರಿಂದ ೪೦೦ ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮತ್ತು ಬೆಂಗಳೂರಿನ ಕುಡಿಯುವ ನೀರಿನ ಅಗತ್ಯಗಳನ್ನು ಪೂರೈಸಲು ಸಾಧ್ಯವಾಗುತ್ತದೆ ಎಂದು ಹೇಳಿದರು. ೨೦೨೩-೨೪ರ ಕೇಂದ್ರ ಬಜೆಟ್‌ನಲ್ಲಿ ಮಧ್ಯ ಕರ್ನಾಟಕದ ಬರಪೀಡಿತ ಪ್ರದೇಶಗಳಿಗೆ ನೀರಾವರಿ ಸೌಲಭ್ಯ ಒದಗಿಸಲು ಭದ್ರಾ ಮೇಲ್ದಂಡೆ ಯೋಜನೆಗೆ ೫ ಸಾವಿರದ ೩೦೦ ಕೋಟಿ ರೂಪಾಯಿ ಅನುದಾನ ಘೋಷಿಸಿದ್ದರೂ ಈವರೆಗೂ ಹಣ

ಬಿಡುಗಡೆಯಾಗಿಲ್ಲ. ಹೀಗಾಗಿ ಯೋಜನೆ ಪೂರ್ಣಗೊಳಿಸಲು ಕೂಡಲೇ ಹಣ ಬಿಡುಗಡೆ ಮಾಡಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದರು.

<><*<><>*><>

ರಾಜ್ಯದ ಕಾಂಗ್ರೆಸ್ ಸರಕಾರವು ಅಭಿವೃದ್ಧಿ ಶೂನ್ಯತೆ ಮತ್ತು ಒಳಜಗಳಗಳ ಕಾರಣಕ್ಕೆ ಪ್ರಚಾರದಲ್ಲಿದೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಟೀಕಿಸಿದ್ದಾರೆ. ಬೆಂಗಳೂರಿನ ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅನುಭವಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅಸಹಾಯಕರಾಗಿದ್ದಾರೆ. ಸರ್ಕಾರ ಗ್ಯಾರಂಟಿ ಹಣ ಬಿಡುಗಡೆಗೊಳಿಸಿಲ್ಲ. ಬಿಪಿಎಲ್ ಪಡಿತರದಾರರಿಗೆ ಅಕ್ಕಿ ಬದಲು ಹಣ ಪಾವತಿಸುತ್ತಿಲ್ಲ. ಗೃಹಲಕ್ಷ್ಮಿ ಫಲಾನುಭವಿಗಳಿಗೆ ಕಳೆದ ೬ ತಿಂಗಳಿಂದ ಮಾಸಿಕ ೨ ಸಾವಿರ ರೂಪಾಯಿ ಪಾವತಿಯಾಗಿಲ್ಲ ಎಂದು ಆರೋಪಿಸಿದರು. ರಾಜ್ಯದಲ್ಲಿ ಆನ್‌ಲೈನ್ ಬೆಟ್ಟಿಂಗ್ ದಂಧೆ ಅವ್ಯಾಹತವಾಗಿ ನಡೆಯುತ್ತಿದೆ. ಈ ಬಗ್ಗೆ ಗಮನಹರಿಸಲು ಸರ್ಕಾರಕ್ಕೆ ಸಮಯವೇ ಇಲ್ಲ ಎಂದು ಛಲವಾದಿ ನಾರಾಯಣಸ್ವಾಮಿ ದೂರಿದರು. ಕಲಬುರಗಿಯಲ್ಲಿ ಉದ್ಯಾನಕ್ಕಾಗಿ ಮೀಸಲಿಟ್ಟ ಸ್ಥಳವನ್ನು ವಾಣಿಜ್ಯ ಉದ್ದೇಶಕ್ಕಾಗಿ ಬಳಸಲು ಅವಕಾಶ ನೀಡುವಂತೆ ಸಿದ್ಧಾರ್ಥ ವಿಹಾರ ಟ್ರಸ್ಟ್ ಮನವಿ ಮಾಡಿದೆ. ಕಾನೂನು ರೀತಿ ಹೀಗೆ ಮಾಡಲು ಸಾಧ್ಯವಿಲ್ಲ ಎಂದು ಅವರು ಹೇಳಿದರು.

<><*<><>*><>

ಬೆಳಗಾವಿಯಲ್ಲಿ ಇಂದು ಭೂ ದಾಖಲೆಗಳ ಇಲಾಖೆ, ಕಂದಾಯ ಇಲಾಖೆ ಹಾಗೂ ನಗರಾಭಿವೃದ್ಧಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ 'ನಕ್ಷಾ' ಸರ್ವೆ ಕಾರ್ಯಕ್ಕೆ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ನಗರ ಪ್ರದೇಶದ ಆಸ್ತಿಗಳ ನಿಖರತೆ ತಿಳಿಯಲು, ನೋಂದಣಿಯ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ಲಭ್ಯವಾಗುವಂತೆ ಮಾಡುವುದು, ಆ ಮೂಲಕ ವಂಚನೆ, ಬೇನಾಮಿ ವಹಿವಾಟುಗಳನ್ನು ಪರಿಶೀಲಿಸುವುದು ಹಾಗೂ ಭೂ ವಿವಾದಗಳನ್ನು ತಗ್ಗಿಸುವ ಉದ್ದೇಶದಿಂದ ಕೇಂದ್ರ ಸರ್ಕಾರವು 'ನಕ್ಷಾ' ಸರ್ವೆ ಯೋಜನೆಯನ್ನು ಪ್ರಾರಂಭಿಸಿದೆ ಎಂದು ಹೇಳಿದರು. ರಾಜ್ಯದಲ್ಲಿ ೧೦ ನಗರಗಳು ಮತ್ತು ದೇಶದಲ್ಲಿ ೧೫೦ ನಗರಗಳು ಪ್ರಾಯೋಗಿಕವಾಗಿ ಈ ಯೋಜನೆಗೆ ಆಯ್ಕೆಯಾಗಿವೆ. ಬೆಳಗಾವಿ ಜಿಲ್ಲೆಯ ಗೋಕಾಕ ಮತ್ತು ಬೋರಗಾಂವ ನಗರಗಳು ಕೂಡ ಯೋಜನೆಗೆ ಆಯ್ಕೆಯಾಗಿವೆ ಎಂದು ಅವರು ಮಾಹಿತಿ ನೀಡಿದರು.

<><*<><>*><>

ಭೂ ದಾಖಲೆಗಳ ಇಲಾಖೆ, ಕಂದಾಯ ಇಲಾಖೆ ಹಾಗೂ ನಗರಾಭಿವೃದ್ಧಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ 'ನಕ್ಷಾ' ಸರ್ವೆ ಕಾರ್ಯಕ್ಕೆ ಮೈಸೂರಿನಲ್ಲಿಂದು ಶಾಸಕ ಜಿ.ಟಿ ದೇವೇಗೌಡರು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಭೂಮಾಲೀಕತ್ವದ ನಿಖರವಾದ ದಾಖಲಾತಿಯನ್ನು ರಚಿಸಲು ಮತ್ತು ನವೀಕರಿಸಲು, ಭೂ ವಿವಾದಗಳನ್ನು ಪರಿಹರಿಸಲು, ಆಸ್ತಿ ದಾಖಲೆಗಳನ್ನು ಸುಗಮಗೊಳಿಸಲು ಮತ್ತು ನಗರ ಯೋಜನೆಯನ್ನು ಹೆಚ್ಚಿಸಲು ಈ ಯೋಜನೆಯನ್ನು ವಿನ್ಯಾಸಗೊಳಿಸಲಾಗಿದೆ ಎಂದು ತಿಳಿಸಿದರು.

<><*<><>*><>

ಚಿಕ್ಕಮಗಳೂರು ಜಿಲ್ಲೆಯ ಮುಳ್ಳಯ್ಯನಗಿರಿ ಪರ್ವತಶ್ರೇಣಿಯ ಚಂದ್ರದ್ರೋಣ ಪರ್ವತದಲ್ಲಿ ಸಂಭವಿಸಿರುವ ಕಾಡ್ಗಿಚ್ಚಿನಿಂದ ಉಂಟಾಗಿದ್ದು, ೨೫ ಎಕರೆಗೂ ಹೆಚ್ಚು ಅರಣ್ಯ ಪ್ರದೇಶ ನಾಶವಾಗಿದೆ

ಎಂದು ಚಿಕ್ಕಮಗಳೂರು ವಲಯ ಅರಣ್ಯ ಉಪ ಸಂರಕ್ಷಣಾಧಿಕಾರಿ ರಮೇಶ್ ಬಾಬು ತಿಳಿಸಿದ್ದಾರೆ. ಇಲ್ಲಿನ ಸೀತಾಳಯ್ಯನಗಿರಿ ಸಮೀಪದ ಬೆಟ್ಟಕ್ಕೆ ನಿನ್ನೆ ರಾತ್ರಿ ಬೆಂಕಿ ಹೊತ್ತಿಕೊಂಡಿದ್ದು, ಔಷಧೀಯ ಗುಣಗಳಿರುವ ಸಸ್ಯಗಳು, ಇತರೆ ಮರ-ಗಿಡಗಳು ನಾಶವಾಗಿವೆ. ಸ್ಥಳಕ್ಕೆ ಅಗ್ನಿಶಾಮಕ ದಳ, ಅರಣ್ಯ ಇಲಾಖೆ ಸಿಬ್ಬಂದಿ ತೆರಳಿ ಬೆಂಕಿ ನಂದಿಸುವ ಕಾರ್ಯ ಮಾಡಿದ್ದು, ಬೆಂಕಿ ಹತೋಟಿಗೆ ಬಂದಿದೆ. ಆದರೆ ಬೆಂಕಿಯನ್ನು ಪೂರ್ಣ ಪ್ರಮಾಣದಲ್ಲಿ ನಂದಿಸಲು ಸಾಧ್ಯವಾಗಿಲ್ಲ ಎಂದು ಮಾಹಿತಿ ನೀಡಿದರು. ಕಳೆದ ಒಂದು ತಿಂಗಳಿನಲ್ಲಿ ಜಿಲ್ಲೆಯಲ್ಲಿ ಕಾಡ್ಗಿಚ್ಚಿನ ನಾಲ್ಕನೇ ಪ್ರಕರಣ ಇದಾಗಿದೆ. ಪ್ರವಾಸಿಗರು ಸೇರಿದಂತೆ ಸ್ಥಳೀಯರು ಅರಣ್ಯ ಪ್ರದೇಶಕ್ಕೆ ತೆರಳಿ, ಧೂಮಪಾನ ಮತ್ತು ಅಡುಗೆ ಮಾಡಬಾರದು ಎಂದು ರಮೇಶ್ ಬಾಬು ಮನವಿ ಮಾಡಿದ್ದಾರೆ.

<><*<><>*><>

೧೪೫ ಕೋಟಿ ರೂಪಾಯಿ ವೆಚ್ಚದಲ್ಲಿ ಚಿಂತಾಮಣಿ ನಗರದಲ್ಲಿ ರಸ್ತೆ, ಪಾದಾಚಾರಿ ರಸ್ತೆ ಮತ್ತಿತರ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ಚಿಂತಾಮಣಿ ತಾಲೂಕಿನ ಕರಿಯಪ್ಪನಹಳ್ಳಿಯಲ್ಲಿ ಇಂದು ೧೩ ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿದ ಅಂಗನವಾಡಿ ಕಟ್ಟಡ ಉದ್ಘಾಟಿಸಿ ಹಾಗೂ ಕಾಗತಿ ಗ್ರಾಮದಲ್ಲಿ ಗ್ರಂಥಾಲಯ ಕಟ್ಟಡ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

<><*<><>*><>

ಬೇಸಿಗೆಯಲ್ಲಿ ಕುಡಿಯುವ ನೀರಿಗೆ ತೊಂದರೆಯಾಗದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಲು ತುಮಕೂರು ಜಿಲ್ಲೆಯಲ್ಲಿರುವ ಕುಡಿಯುವ ನೀರಿನ ಸಮಸ್ಯಾತ್ಮಕ ಗ್ರಾಮಗಳನ್ನು ತುರ್ತಾಗಿ ಗುರುತಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ. ಎನ್.ತಿಪ್ಪೇಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಜಿಲ್ಲೆಯ ಕುಡಿಯುವ ನೀರು ಮತ್ತು ಮೇವಿನ ಸ್ಥಿತಿ-ಗತಿ ಕುರಿತು ಸಭೆ ನಡೆಸಿದ ಅವರು, ಮುಂದಿನ ೬ ತಿಂಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆ ಉಂಟಾಗಬಹುದಾದ ಗ್ರಾಮಗಳನ್ನು ಗುರುತಿಸಿ, ಅಗತ್ಯವಿರುವ ಕಡೆ ತುರ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಕ್ರಿಯಾ ಯೋಜನೆ ಸಿದ್ಧಪಡಿಸಬೇಕು ಎಂದು ನಿರ್ದೇಶನ ನೀಡಿದರು.

<><*<><>*><>

ಬಳ್ಳಾರಿ ಜಿಲ್ಲೆಯಲ್ಲಿ ಗರ್ಭಿಣಿ ಮತ್ತು ಬಾಣಂತಿಯರ ಆರೋಗ್ಯ ವರ್ಧನೆಗೆ ಪೌಷ್ಠಿಕ ಆಹಾರ ಸೇವನೆ, ರಕ್ತಹೀನತೆ ತಡೆಗಟ್ಟಲು ಕಬ್ಬಿಣಾಂಶ ಮಾತ್ರೆಗಳ ಸೇವನೆ ಸೇರಿದಂತೆ ವಿಶೇಷ ಕಾಳಜಿ ವಹಿಸಲು, ಸೂಕ್ತ ಕಾರ್ಯಯೋಜನೆ ರೂಪಿಸಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಕೆ.ನಾಗಣ್ಣ ಗೌಡ, ವೈದ್ಯಾಧಿಕಾರಿಗಳಿಗೆ ನಿರ್ದೇಶನ ನೀಡಿದರು. ಬಳ್ಳಾರಿಯಲ್ಲಿಂದು ವೈದ್ಯಾಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ಭಾಗವು ಗರ್ಭಿಣಿ ಮಹಿಳೆಯರು ಮತ್ತು ಬಾಣಂತಿಯರ ಆರೈಕೆಯಲ್ಲಿ ವಿಶೇಷ ಕಾಳಜಿ ವಹಿಸಬೇಕಿದೆ. ಜಿಲ್ಲೆಯಲ್ಲಿ ವಿಶೇಷ ಅನುದಾನ ಲಭ್ಯವಿದ್ದು, ವೈದ್ಯಾಧಿಕಾರಿಗಳು ಸೂಕ್ತ ಕಾರ್ಯಯೋಜನೆ ರೂಪಿಸಿ, ಗರ್ಭಿಣಿ ಮತ್ತು ಬಾಣಂತಿಯರ ಮರಣ ಪ್ರಮಾಣ ತಗ್ಗಿಸಲು ಕ್ರಮವಹಿಸಬೇಕಿದೆ ಎಂದು ಹೇಳಿದರು.

<><*<><>*><>

ಚಿತ್ರದುರ್ಗ ಜಿಲ್ಲೆಯಲ್ಲಿ ಈ ಬಾರಿಯ ಎಸ್‌ಎಸ್‌ಎಲ್‌ಸಿ ಫಲಿತಾಂಶವನ್ನು ಗಣನೀಯವಾಗಿ ಹೆಚ್ಚಳ ಮಾಡಲು ಅಗತ್ಯ ಪೂರ್ವಸಿದ್ಧತೆ ಕೈಗೊಳ್ಳಬೇಕು ಎಂದು ಶಾಲಾ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಸೂಚನೆ

ನೀಡಿದ್ದಾರೆ. ನಗರದ ಜಿಲ್ಲಾ ಪಂಚಾಯಿತಿ ಕಾರ್ಯಾಲಯದಲ್ಲಿ ಎಸ್‌ಎಸ್‌ಎಲ್‌ಸಿ ಶೈಕ್ಷಣಿಕ ಪ್ರಗತಿ ಹಾಗೂ ಪೂರ್ವ ಸಿದ್ಧತೆ ಕುರಿತು ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

<><*<><>*><>

ಕ್ಷಯ ರೋಗವನ್ನು ಕರಾರುವಕ್ಕಾಗಿ ಪತ್ತೆ ಹಚ್ಚಿ, ಚಿಕಿತ್ಸೆ ನೀಡಬಹುದು. ನಿರಂತರ ಚಿಕಿತ್ಸೆಯಿಂದ ಕ್ಷಯ ರೋಗ ಗುಣಪಡಿಸಬಹುದು ಎಂದು ಯಾದಗಿರಿ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ. ಸಂಜೀವಕುಮಾರ್ ರಾಯಚೂರಕರ್ ಹೇಳಿದ್ದಾರೆ. ಯಾದಗಿರಿ ಜಿಲ್ಲೆಯ ಸುರಪುರ ನಗರದ ಸರ್ಕಾರಿ ಆಸ್ಪತ್ರೆಯಲ್ಲಿ ಕ್ಷಯರೋಗಿಗಳಿಗೆ ನಿಕ್ಷಯ ಮಿತ್ರರಾಗಿ ವೈದ್ಯರು ನೀಡಿದ ಆಹಾರ ಧಾನ್ಯಗಳ ಕಿಟ್ ಮತ್ತು ಪ್ರೋಟಿನ್ ಪೌಡರ್ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಾಹಿತಿ ಕೊರತೆ ಮತ್ತು ಸರಿಯಾದ ಚಿಕಿತ್ಸೆ ಪಡೆಯದ ಕಾರಣ, ಕಳೆದ ವರ್ಷ ಜಿಲ್ಲೆಯಲ್ಲಿ ೫೯ ಜನರು ಕ್ಷಯರೋಗದಿಂದ ಮರಣ ಹೊಂದಿದ್ದಾರೆ ಎಂದರು. ಕ್ಷಯರೋಗಿಗಳಿಗೆ ಔಷಧದ ಜೊತೆಗೆ ಪ್ರೋತ್ಸಾಹ ಯೋಜನೆಯಡಿಯಲ್ಲಿ ೧ ಸಾವಿರ ರೂಪಾಯಿ ನೀಡಲಾಗುತ್ತಿದೆ. ರೋಗಿಗಳು ಮಪ್ರೋಟಿನ್ ಮತ್ತು ಪೋಷಕಾಂಶಯುಕ್ತ ಆಹಾರವನ್ನು ಸೇವಿಸಬೇಕು ಎಂದು ಅವರು ಸಲಹೆ ನೀಡಿದರು.

<><*<><>*><>

ಸಂಕ್ಷಿಪ್ತ ಸುದ್ದಿಗಳು

- ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ದಲಿತ ಮುಖಂಡರೊಂದಿಗೆ ಬಜೆಟ್ ಪೂರ್ವ ಸಮಾಲೋಚನೆ ನಡೆಸಿದರು.
- ಭಾರತ ರತ್ನ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ಶತಮಾನೋತ್ಸವ ಅಭಿಯಾನದ ಅಂಗವಾಗಿ ಅವರ ಜೊತೆ ಕೆಲಸ ನಿರ್ವಹಿಸಿರುವ ಹಿರಿಯ ಕಾರ್ಯಕರ್ತರಾದ ಸರೋಜಿನಿ ಮುತ್ತಣ್ಣ ಅವರ ಬೆಂಗಳೂರಿನ ಜಯನಗರದ ನಿವಾಸಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮತ್ತು ಮುಖಂಡರು ಭೇಟಿ ನೀಡಿದರು. ಈ ವೇಳೆ ವಾಜಪೇಯಿ ಅವರ ಒಡನಾಟ ಸಂಬಂಧಿತ ಮಾಹಿತಿ ಸಂಗ್ರಹಿಸಿದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>